ಶ್ರೀ ಹೆಚ್.ಜಿ. ಗೋವಿಂದೇಗೌಡ (ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವರು) :—

ಪ್ರ 82

ಅ) 1997-98ನೇ ಸಾಲಿನ ವಿಭಾಗೀಯ ನೇಮಕಾತಿಯಲ್ಲಿ ಹೆಚ್ಚುವರಿ ಪಟ್ಟಿಯಲ್ಲಿ ಆಯ್ಕೆಯಾಗಿರುವ ಅಭ್ಯರ್ಥಿಗಳಿಂದ ಕೌನ್ಸಿಲಿಂಗ್ ವಿಧಾನದಲ್ಲಿ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮ ತೆಗೆದುಕೊಳ್ಳಲಾಗುತ್ತಿದೆ.

ಕುಣಿಗಲ್ ತಾಲ್ಲೂಕಿನ ಗುನ್ನಾಗೆರೆಯಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರ.

35(148) ಶ್ರೀ ಎಸ್.ಪಿ. ಮುದ್ದಹನುಮೇಗೌಡ (ಕುಣಿಗಲ್) :— ಮಾನ್ಯ ಆರೋಗ್ಯ ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ತುಮಕೂರು ಜಿಲ್ಲೆಯ ಕುಣಿಗಲ್ ತಾಲ್ಲೂಕಿನ ಗುನ್ನಾಗೆರೆಯಲ್ಲಿ ಪ್ರಾ. ಆ.ಕೇಂದ್ರ ತೆರೆಯುವ ಅವಶ್ಯಕತೆ ಇದೆ ಎನ್ನುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದಲ್ಲಿ, ಅದನ್ನು ಎಂದಿನಿಂದ ತೆರೆಯಲಾಗುವುದು.

ಡಾ: ಹೆಚ್.ಸಿ. ಮಹದೇವಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :—

ಅ) ಬಂದಿದೆ.

ಆ) ರಾಜ್ಯದಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರಗಳ ಮಂಜೂರು ಮಾಡುವ ಬಗ್ಗೆ ಪ್ರಸ್ತಾವನೆಯು ಸರ್ಕಾರದ ಪರಿಶೀಲನೆಯಲ್ಲಿದೆ.

ಸ್ವಸ್ತಿ ಯೋಜನೆ ರಾಜ್ಯದಲ್ಲಿ ಅನುಷ್ಠಾನಗೊಳ್ಳುತ್ತಿರುವ ಬಗ್ಗೆ.

36(149) ಶ್ರೀ ಎಸ್.ಪಿ. ಮುದ್ದಹನುಮೇಗೌಡ (ಕುಣಿಗಲ್) :— ಮಾನ್ಯ ಗ್ರಾಮೀಣಾಭಿವೃದ್ಧಿ ಪಂಚಾಯತ್‌ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಸ್ವಸ್ತಿ ಯೋಜನೆ ರಾಜ್ಯದಲ್ಲಿ ಅನುಷ್ಠಾನಗೊಳ್ಳುತ್ತಿದೆಯೇ?

ಆ) ಹಾಗಿದ್ದಲ್ಲಿ, ಇದುವರೆಗೆ ಆಗಿರುವ ಪ್ರಗತಿ ಎಷ್ಟು?

ಇ) ತುಮಕೂರು ಜಿಲ್ಲೆಯಲ್ಲಿ ಈ ಯೋಜನೆಯ ಅಡಿಯಲ್ಲಿ ಆಗಿರುವ ಪ್ರಗತಿ ಎಷ್ಟು?